# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 787 (889) |
| ಸದಸ್ಯರ ಹೆಸರು | ಶ್ರೀ ಎ. ವಸಂತಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 16-12-2024 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ಕಳೆದ 5 ವರ್ಷಗಳಿಂದ ಶಿಥಿಲಾವ್ಯವಸ್ಥೆಯಲ್ಲಿದ್ದು, ವಿದ್ಯಾರ್ಥಿಗಳು ಜೀವ ಭಯದಲ್ಲಿ ಅಭ್ಯಾಸ ಮಾಡುತ್ತಿರುವುದು ಹಾಗೂ ಬಣ್ಣವಿಲ್ಲದೆ ಕಾಲೇಜು ಕಟ್ಟಡ ಪೂರ್ತಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; | ಹೌದು. ಸರ್ಕಾರದ ಗಮನಕ್ಕೆ ಬಂದಿದೆ.<br><br>ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2020-21ನೇ ಸಾಲಿನ ಸಾಮಾನ್ಯ ಯೋಜನೆಯಡಿ ಮಹಿಳಾ ವಿಶ್ರಾಂತಿ ಕೊಠಡಿ ನಿರ್ಮಾಣವನ್ನೊಳಗೊಂಡಂತೆ ದುರಸ್ತಿ ಕಾಮಗಾರಿಗಳಿಗಾಗಿ ರೂ.50.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. |
| ಆ) | ಈ ಕಾಲೇಜು ದುರಸ್ತಿ ಕಾರ್ಯವನ್ನು ಯಾವಾಗ ಪ್ರಾರಂಭ ಮಾಡಲಾಗುವುದು ? (ಮಾಹಿತಿ ನೀಡುವುದು) | ದುರಸ್ತಿ ಅಗತ್ಯವಿದ್ದ ಕಾಲೇಜಿನ ಕಟ್ಟಡ ಹಾಗೂ ಜಮೀನಿಗೆ ಸಂಬಂಧಿಸಿದಂತೆ ವಿವಾದವು ನ್ಯಾಯಾಲಯದಲ್ಲಿ ಬಾಕಿ ಇದ್ದುದರಿಂದ ದುರಸ್ತಿ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.<br><br>ನ್ಯಾಯಾಲಯದಲ್ಲಿ ವಿವಾದವು ಬಗೆಹರಿದಿದ್ದು, ಸದರಿ ಕಾಲೇಜಿನ ದುರಸ್ತಿ ಕಾಮಗಾರಿಯನ್ನು ಈಗಾಗಲೇ ಕೈಗೊಳ್ಳಲಾಗಿದೆ. |

ಕಡತ ಸಂಖ್ಯೆ: ಇಡಿ 152 ಹೆಚ್‌ಪಿಸಿ 2024)

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು